# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 61 (575)
ಸದಸ್ಯರ ಹೆಸರು : ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 09-03-2026
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಂದ ಪ್ರಾಚಾರ್ಯರ ಹುದ್ದೆಗೆ ಬಡ್ತಿ ನೀಡುವ ಸಲುವಾಗಿ C R ಕರೆದಿದ್ದು, ಮುಂದಿನ ಪ್ರಕ್ರಿಯೆ ಯಾವ ಹಂತದಲ್ಲಿದೆ: | ಪ್ರಸ್ತುತ ಖಾಲಿ ಇರುವ ಹಾಗೂ ಮುಂಬರುವ 6 ತಿಂಗಳಲ್ಲಿ ಖಾಲಿಯಾಗಲಿರುವ ಪ್ರಾಂಶುಪಾಲರ ಹುದ್ದೆಗಳಿಗೆ ಮುಂಬಡ್ತಿ ನೀಡಲು ಶಾಲಾ ಶಿಕ್ಷಣ ಇಲಾಖೆ (ಸರ್ಕಾರಿ ಪದವಿ ಪೂರ್ವ ಕಾಲೇಜು) ಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಉಪನ್ಯಾಸಕರಿಂದ ವ್ಯಕ್ತಿ ಪೂರ್ವೋತ್ತರ ದಸ್ತಾವೇಜುಗಳು ನಿರ್ದೇಶನಾಲಯದಲ್ಲಿ ಸ್ವೀಕೃತವಾಗಿದ್ದು, ಪ್ರಸ್ತುತ ಪರಿಶೀಲನೆಯ ಹಂತದಲ್ಲಿದೆ.<br><br>ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಉಪನ್ಯಾಸಕರ ವೃಂದದ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅದಕ್ಕೆ ಸ್ವೀಕೃತವಾದ 461 ಆಕ್ಷೇಪಣೆಗಳನ್ನು ಪರಿಶೀಲಿಸಿ, ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಕ್ರಮವಹಿಸಲಾಗುತ್ತಿದೆ.<br><br>ಉಪನ್ಯಾಸಕರ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ ನಂತರ ಸದರಿ ಪಟ್ಟಿಯಾನುಸಾರ ಮತ್ತು ಚಾಲ್ತಿಯಲ್ಲಿರುವ ಸರ್ಕಾರದ ನಿಯಮಗಳನ್ವಯ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಇವರು ಪರಿಶೀಲಿಸಿ, ಪ್ರಾಂಶುಪಾಲರ ಹುದ್ದೆಗಳಿಗೆ ಮುಂಬಡ್ತಿ ನೀಡಲು ಪ್ರಸ್ತಾವನೆಯನ್ನು ಸಲ್ಲಿಸಿದ ನಂತರ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು. |
| ಆ) | ರಾಜ್ಯದಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆ ಖಾಲಿಯಿದ್ದು, ಪರೀಕ್ಷೆ ಮತ್ತು ದಾಖಲಾತಿ ಪ್ರಕ್ರಿಯೆಗೆ ತೊಂದರೆಯಾಗುವುದಿಲ್ಲವೇ: ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆಯೇ; | 1225 ಪ್ರಾಂಶುಪಾಲರ ವೃಂದದ ಹುದ್ದೆಗಳು ಮಂಜೂರಾಗಿದ್ದು, ಇದರಲ್ಲಿ 306 ನೇರ ನೇಮಕಾತಿಗೆ ಮತ್ತು 919 ಬಡ್ತಿಗೆ ಮೀಸಲಿರುತ್ತವೆ. ನೇರ ನೇಮಕಾತಿಯ 306 ಹುದ್ದೆಗಳ ಪೈಕಿ 247 ಹುದ್ದೆಗಳನ್ನು ಸೇವಾ ನಿರತ ಉಪನ್ಯಾಸಕರಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಸುವ ಮೂಲಕ ಆಯ್ಕೆ ಪ್ರಕ್ರಿಯೆಗಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸರ್ಕಾರದ ಪತ್ರ ಸಂಖ್ಯೆ: ಇಪಿ 73 ಡಿಜಿಡಿ 2021, ದಿನಾಂಕ: 28-11-2025 ರಲ್ಲಿ ಸರ್ಕಾರದಿಂದ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br><br>ಇನ್ನುಳಿದಂತೆ ಪ್ರಸ್ತುತ ಬಡ್ತಿ ಕೋಟಾದಡಿ ಖಾಲಿ ಇರುವ ಹಾಗೂ ಮುಂಬರುವ 6 ತಿಂಗಳಲ್ಲಿ ಖಾಲಿಯಾಗಲಿರುವ ಪ್ರಾಂಶುಪಾಲರ ಹುದ್ದೆಗಳಿಗೆ ಶಾಲಾ ಶಿಕ್ಷಣ ಇಲಾಖೆ |

| | | |
|---|---|---|
| | | (ಸರ್ಕಾರಿ ಪದವಿ ಪೂರ್ವ ಕಾಲೇಜು) ಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಉಪನ್ಯಾಸಕರಿಗೆ ಮುಂಬಡ್ತಿ ನೀಡಲು ನಿಯಮಾನುಸಾರ ಕ್ರಮವಹಿಸಲಾಗುವುದು.<br>ಪ್ರಸ್ತುತ ಖಾಲಿಯಿರುವ 561 ಪ್ರಾಂಶುಪಾಲರ ಹುದ್ದೆಗಳಿಗೆ ಆಯಾ ಕಾಲೇಜಿನ ಹಿರಿಯ ಉಪನ್ಯಾಸಕರುಗಳನ್ನು ಕರ್ನಾಟಕ ನಾಗರಿಕ ಸೇವಾ ನಿಯಮಗಳ ನಿಯಮ-68 ರಡಿ ಪ್ರಾಂಶುಪಾಲರ ಹುದ್ದೆಗೆ ಪ್ರಭಾರದಲ್ಲಿರಿಸಿ ಶೈಕ್ಷಣಿಕ, ಆಡಳಿತಾತ್ಮಕ ಚಟುವಟಿಕೆ ಮತ್ತು ಪರೀಕ್ಷಾ ಕಾರ್ಯಗಳಿಗೆ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ. |
| ಇ) | ಕ್ರಮ ಕೈಗೊಂಡಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಹುದ್ದೆಗಳನ್ನು ಭರ್ತಿ ಮಾಡಲಾಗುವುದು: | ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಉಪನ್ಯಾಸಕರ ವೃಂದದ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅದಕ್ಕೆ ಸ್ವೀಕೃತವಾದ 461 ಆಕ್ಷೇಪಣೆಗಳನ್ನು ಪರಿಶೀಲಿಸಿ, ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಕ್ರಮವಹಿಸಲಾಗುತ್ತಿದೆ. ಜೇಷ್ಠತಾ ಪಟ್ಟಿ ಅಂತಿಮಗೊಂಡ ನಂತರ ಉಪನ್ಯಾಸಕರ ವೃಂದದಿಂದ ಪ್ರಾಂಶುಪಾಲರ ವೃಂದಕ್ಕೆ ಬಡ್ತಿ ನೀಡುವ ಬಗ್ಗೆ ಚಾಲ್ತಿಯಲ್ಲಿರುವ ಸರ್ಕಾರದ ನಿಯಮಗಳನ್ವಯ ಪರಿಶೀಲಿಸಿ, ಅಗತ್ಯ ಕ್ರಮವಹಿಸಲಾಗುವುದು. |
| (ಈ) | ಉಪನ್ಯಾಸಕರಿಂದ ಪ್ರಾಚಾರ್ಯರ ಹುದ್ದೆಗೆ ಪದೋನ್ನತಿ ನೀಡಲು CR ಕರೆದಿದ್ದು, D.P.C ಮಾಡಿ ಪ್ರಾಚಾರ್ಯರ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? | |

ಸಂಖ್ಯೆ: ಇಪಿ 73 ಡಿಜಿಡಬ್ಲೂ 2026

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು